**All India Radio: Bangalore**
**Regional Bulletin In Kannada**
**13.11.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**13.11.2025 / 6.40 p.m.**
*******************

**ಮುಖ್ಯಾಂಶಗಳು**

1. **ನವಮಂಗಳೂರು ಬಂದರಿನಲ್ಲಿ ಒಂದು ಸಾವಿರದ 500 ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಕೇಂದ್ರ ಸಚಿವ ಸರ್ಬಾನಂದ ಸೋನಾವಾಲ್ ಚಾಲನೆ**
2. **ಮೇಕೆದಾಟು ಯೋಜನೆ ವಿರುದ್ಧ ತಮಿಳುನಾಡು ಸಲ್ಲಿಸಿದ್ದ ಅರ್ಜಿ ಸುಪ್ರೀಂಕೋರ್ಟ್‌ನಲ್ಲಿ ವಜಾ**
3. **ಡಿಸೆಂಬರ್ 8 ರಿಂದ 19ರವರೆಗೆ ಬೆಳಗಾವಿ ವಿಧಾನಸಭೆ ಅಧಿವೇಶನಕ್ಕೆ ದಿನಾಂಕ ನಿಗದಿ**
4. **ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥಸಂಚಲನಕ್ಕೆ ಷರತ್ತು ಬದ್ಧ ಅನುಮತಿ ನೀಡಿದ ಉಚ್ಚ ನ್ಯಾಯಾಲಯ**
5. **ಕಾಡುಪ್ರಾಣಿ– ಮಾನವ ಸಂಘರ್ಷ ಹಿನ್ನೆಲೆ: ಮೈಸೂರಿನಲ್ಲಿ ಅರಣ್ಯ ಇಲಾಖೆ ವಿರುದ್ಧ ರೈತರ ಪ್ರತಿಭಟನೆ**
6. **ದೆಹಲಿ ಸ್ಫೋಟ ಪ್ರಕರಣ: ತುಮಕೂರಿನಲ್ಲಿ ಓರ್ವನ ವಿಚಾರಣೆ; ರಾಜಕೀಯ ಮಾಡದಂತೆ ಬಿಜೆಪಿ ಆಗ್ರಹ**

***************

ದೇಶದ ಎಲ್ಲಾ ಬಂದರುಗಳನ್ನು ಆಧುನೀಕರಣಗೊಳಿಸುವ ಮೂಲಕ ಅಭಿವೃದ್ಧಿಪಡಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಬಂದರು, ಹಡಗು ಮತ್ತು ಜಲಸಾರಿಗೆ ಸಚಿವ ಸರ್ಬಾನಂದ ಸೋನಾವಾಲ್ ತಿಳಿಸಿದ್ದಾರೆ.

ನವ ಮಂಗಳೂರು ಬಂದರು ಪ್ರಾಧಿಕಾರದ ಸುವರ್ಣ ಮಹೋತ್ಸವ ಸಂಭ್ರಮದ ವೇಳೆ 1 ಸಾವಿರದ 500 ಕೋಟಿ ರೂಪಾಯಿ ಮೌಲ್ಯದ 20 ವಿವಿಧ ಯೋಜನೆಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಎಲ್ಲಾ ಬಂದರುಗಳ ಸಾಮರ್ಥ್ಯವನ್ನು ತಾಂತ್ರಿಕವಾಗಿ, ಡಿಜಿಟಲೀಕರಣಗೊಳಿಸುವ ಮೂಲಕ ಮೇಲ್ದರ್ಜೆಗೇರಿಸಲಾಗಿದೆ ಎಂದು ಹೇಳಿದ್ದಾರೆ.

90 ಸಾವಿರ ಟನ್‌ಗಳಷ್ಟು ಸರಕು ರಫ್ತು ಮಾಡುತ್ತಿದ್ದ ನವಮಂಗಳೂರು ಬಂದರು ಈಗ 44 ಮಿಲಿಯನ್ ಟನ್‌ಗಳಷ್ಟು ಸರಕು ರಫ್ತು ಮಾಡುತ್ತಿದೆ ಎಂದು ತಿಳಿಸಿದ್ದಾರೆ.

**ಧ್ವನಿ: ಸರ್ಬಾನಂದ ಸೋನಾವಾಲ್**

ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಹ್ಲಾದ್ ಜೋಶಿ ಮಾತನಾಡಿ, ದೇಶದ ಸಮಗ್ರ ಅಭಿವೃದ್ಧಿಯ ಚಿಂತನೆ ಹೊಂದಿರುವ ಪ್ರಧಾನಿ ನರೇಂದ್ರ ಮೋದಿಯವರಿಂದಾಗಿ ಭಾರತ ಜಗತ್ತಿನ ನಾಲ್ಕನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರ ಹೊಮ್ಮಿದೆ. ವಿಕಸಿತ ಭಾರತ ಕಲ್ಪನೆಯಿಂದಾಗ ದೇಶದಲ್ಲಿ ಮಹತ್ತರ ಬದಲಾವಣೆ ಆಗುತ್ತಿದೆ ಎಂದು ಹೇಳಿದ್ದಾರೆ. ಮಂಗಳೂರು ಬಂದರಿನ ಮೂಲಕ ಕಾರ್ಗೋ ರಫ್ತು ಇನ್ನೂ ಹೆಚ್ಚಾಗಬೇಕು. ಉತ್ಪಾದನಾ ಸಾಮರ್ಥ್ಯ ಹೆಚ್ಚಿಸಲು ಹೆಚ್ಚು ಆದ್ಯತೆ ನೀಡಬೇಕು ಎಂದು ತಿಳಿಸಿದ್ದಾರೆ.

***************

ಮೇಕೆದಾಟು ಯೋಜನೆಗೆ ಮುಂದಾಗಿರುವ ರಾಜ್ಯ ಸರ್ಕಾರದ ಕ್ರಮ ಪ್ರಶ್ನಿಸಿ ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ನೇತೃತ್ವದ ಪೀಠ ಇಂದು ವಜಾಗೊಳಿಸಿದೆ.

ವಿಚಾರಣೆ ನಡೆಸಿದ ನ್ಯಾಯಾಲಯ, ಈ ಯೋಜನೆ, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ಕೇಂದ್ರ ಜಲ ಆಯೋಗದಂತಹ ಪರಿಣಿತ ಸಂಸ್ಥೆಗಳ ಪರಿಶೀಲನೆಯಲ್ಲಿದೆ. ಹೀಗಾಗಿ ಈ ವಿಚಾರದಲ್ಲಿ ಮಧ್ಯಪ್ರವೇಶ ಮಾಡುವುದಿಲ್ಲ ಎಂದು ತಿಳಿಸಿದೆ.

ಈ ತೀರ್ಪಿನಿಂದ ಮೇಕೆದಾಟು ಯೋಜನೆ ವಿಚಾರದಲ್ಲಿ ರಾಜ್ಯ ಸರ್ಕಾರಕ್ಕೆ ದೊಡ್ಡ ಗೆಲುವು ದೊರೆತಿದೆ.

***************

ಮೇಕೆದಾಟು ಯೋಜನೆ ಕುರಿತಂತೆ ಸುಪ್ರಿಂಕೋರ್ಟ್‌ನಲ್ಲಿ ತಮಿಳುನಾಡು ವಿರುದ್ಧ ತೀರ್ಪು ಬಂದಿರುವ ಹಿನ್ನೆಲೆಯಲ್ಲಿ ಯೋಜನೆಗಾಗಿ ಹೋರಾಟ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಸಚಿವ ಸಂಪುಟ ಅಭಿನಂದಿಸಿದೆ.

ಇಂದಿನ ಸಂಪುಟ ಸಭೆಯಲ್ಲಿ ಡಿಸೆಂಬರ್ 8 ರಿಂದ 19ರವರೆಗೆ ಬೆಳಗಾವಿ ವಿಧಾನಸಭೆ ಅಧಿವೇಶನಕ್ಕೆ ದಿನಾಂಕ ನಿಗದಿಪಡಿಸಲಾಗಿದೆ.

ಬೀದರ್ ಜಿಲ್ಲೆಯ ಬಾಲ್ಕಿ ಪುರಸಭೆಯನ್ನು ನಗರಸಭೆಯಾಗಿ ಮೇಲ್ದರ್ಜೆಗೇರಿಸಲು ಅನುಮೋದನೆ ನೀಡಲಾಗಿದೆ. ಹಾಸನ ವೈದ್ಯಕೀಯ ಕಾಲೇಜಿನಲ್ಲಿ 150 ಹಾಸಿಗೆಗಳ ಆಸ್ಪತ್ರೆ ವ್ಯವಸ್ಥೆ ಕಲ್ಪಿಸಲು ಆರ್ಥಿಕ ಅನುಮೋದನ ನೀಡಲಾಗಿದೆ.

ಕರ್ನಾಟಕ ಮಾಹಿತಿ ತಂತ್ರಜ್ಞಾನ ನೀತಿಗೆ ಅನುಮೋದನೆ ನೀಡಲಾಗಿದ್ದು, ಇದರಲ್ಲಿ ಕೃತಕಬುದ್ಧಿಮತ್ತೆ, ಕ್ವಾಂಟಮ್, ಹಸಿರು ನೀತಿ, ಸೈಬರ್ ಸಿಟಿ ಒಳಗೊಂಡಿದೆ.

***************

ಕಲಬುರ್ಗಿಯ ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥ ಸಂಚಲನ ವಿಚಾರಕ್ಕೆ ಸಂಬಂಧಿಸಿದಂತೆ ಕಲಬುರ್ಗಿಯ ಹೈಕೋರ್ಟ್ ಪೀಠ ಷರತ್ತು ಬದ್ಧ ಅನುಮತಿ ನೀಡಿದೆ.

ಇದೇ 16 ರಂದು ಮಧ್ಯಾಹ್ನ 3.30 ರಿಂದ ಸಂಜೆ 5.45 ರವರೆಗೆ ಪಥಸಂಚಲನಕ್ಕೆ ಅವಕಾಶ ಕಲ್ಪಿಸಲಾಗಿದೆ. 350 ಆರ್‌ಎಸ್‌ಎಸ್ ಕಾರ್ಯಕರ್ತರು ಮಾತ್ರ ಪಾಲ್ಗೊಳ್ಳಲು ನ್ಯಾಯಾಲಯ ಅವಕಾಶ ಕಲ್ಪಿಸಿದೆ.

***************

ಮೈಸೂರು ಜಿಲ್ಲೆಯ ಕಾಡಂಚಿನ ಪ್ರದೇಶಗಳಾದ ಹೆಚ್ ಡಿ ಕೋಟೆ, ಸರಗೂರು, ಹುಣಸೂರು ಸೇರಿದಂತೆ ವಿವಿಧ ಕಡೆಗಳಲ್ಲಿ ಕಾಡುಪ್ರಾಣಿ ಮಾನವ ಸಂಘರ್ಷ ನಿರಂತರವಾಗಿ ನಡೆಯುತ್ತಿರುವ ಹಿನ್ನೆಲೆಯಲ್ಲಿ ವಿವಿಧ ರೈತ ಸಂಘಟನೆಗಳ ಸದಸ್ಯರು ಇಂದು ಅರಣ್ಯ ಇಲಾಖೆಯ ಅಧಿಕಾರಿಗಳ ವಿರುದ್ಧ ಪ್ರತಿಭಟನೆ ನಡೆಸಿದ್ದಾರೆ.

ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ರೈತರು ಮೈಸೂರಿನ ಅಶೋಕಪುರಂನಲ್ಲಿರುವ ಅರಣ್ಯ ಭವನದ ಮುಂಭಾಗ ಜಮಾಯಿಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

"ಕಾಡುಪ್ರಾಣಿಗಳಿಂದ ರಕ್ಷಣೆ ನೀಡಬೇಕು' ಹಾಗೂ "ಅಕ್ರಮ ರೆಸಾರ್ಟ್‌ಗಳನ್ನು ತಕ್ಷಣ ತೆರವುಗೊಳಿಸಬೇಕು" ಎಂದು ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ರೈತರು ಸರ್ಕಾರಕ್ಕೆ 15 ದಿನಗಳ ಗಡುವು ನೀಡಿದ್ದು, ಆ ಅವಧಿಯಲ್ಲಿ ಅಕ್ರಮ ರೆಸಾರ್ಟ್‌ಗಳನ್ನು ತೆರವುಗೊಳಿಸದಿದ್ದರೆ, "ನಾವೇ ನೆಲಸಮ ಮಾಡುವುದಾಗಿ ಎಚ್ಚರಿಕೆ ನೀಡಿದ್ದಾರೆ.

***************

ದೆಹಲಿ ಬಾಂಬ್ ಸ್ಫೋಟಕ್ಕೆ ಸಂಬಂಧಿಸಿದಂತೆ ತುಮಕೂರಿನಲ್ಲಿ ವ್ಯಕ್ತಿಯೊಬ್ಬನನ್ನು ಪೊಲೀಸರು ವಿಚಾರಣೆ ನಡೆಸಿದ್ದಾರೆ. ಪಿ.ಎಸ್ ಕಾಲೋನಿಯಲ್ಲಿ ವಾಸಿಸುತ್ತಿದ್ದ ಮಾಜಿ ಭಯೋತ್ಪಾದಕ ಮುಜಾಹಿದ್‌ನನ್ನು ವಿಚಾರಣೆ ನಡೆಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುರುಷೋತ್ತಮ್, ಆತನ ಪಾತ್ರವಿಲ್ಲ ಎಂದು ದೃಢಪಟ್ಟ ಬಳಿಕ ಬಿಡುಗಡೆ ಮಾಡಿದ್ದಾರೆ.

ಈತ ಭಯೋತ್ಪಾದಕ ಸಂಘಟನೆಗಾಗಿ ಸಭೆ ಆಯೋಜಿಸಿದ ಆರೋಪ ಎದುರಿಸುತ್ತಿದ್ದು, ಆರು ವರ್ಷಗಳ ಕಾಲ ಜೈಲಿನಲ್ಲಿದ್ದು, ಹೊರಬಂದಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

***************

ಬಾಂಬ್ ಸ್ಫೋಟದಂತಹ ರಾಷ್ಟ್ರಿಯ ಬಿಕ್ಕಟ್ಟಿನ ಸಂದರ್ಭದಲ್ಲಿ ಎಲ್ಲಾ ರಾಜಕೀಯ ಪಕ್ಷಗಳು, ರಾಜಕೀಯ ಮಾಡದೆ, ಒಗ್ಗಟ್ಟಿನಿಂದ ಒಂದೇ ಧ್ವನಿಯಲ್ಲಿ ಮಾತನಾಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಫೋಟ ಪ್ರಕರಣವನ್ನು ಬಿಹಾರ ಚುನಾವಣೆಯೊಂದಿಗೆ ಜೋಡಿಸಲು ಪಿತೂರಿ ನಡೆಯುತ್ತಿದೆ ಎಂದು ಆರೋಪಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಪಕ್ಷದ ಆಂತರಿಕ ಸಂಘರ್ಷಗಳನ್ನು ಬದಿಗಿಟ್ಟು ರೈತರ ಹಿತಾಸಕ್ತಿಗಳನ್ನು ಕಾಪಾಡಲು ದೃಢ ನಿರ್ಧಾರ ತೆಗೆದುಕೊಳ್ಳುವಂತೆ ಒತ್ತಾಯಿಸಿದ್ದಾರೆ.

***************

**ಹಾಸನ ಜಿಲ್ಲೆಯಲ್ಲಿ** ವನ್ಯ ಜೀವಿಗಳ ದಾಳಿಯಿಂದ ಗಾಯಗೊಂಡವರಿಗೆ 24 ಗಂಟೆಯೊಳಗೆ ಪರಿಹಾರ ನೀಡಲು ಕ್ರಮವಹಿಸುವಂತೆ ಹಾಸನ ಜಿಲ್ಲಾಧಿಕಾರಿ ಲತಾ ಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಇಂದು ಮಾನವ ಮತ್ತು ಪ್ರಾಣಿಗಳ ಸಂಘರ್ಷ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು 2025ರ ಜನವರಿಯಿಂದ ಇದುವರೆಗೆ ಸಂಭವಿಸಿರುವ ಅವಘಡಗಳು, ಸಾವು, ಗಾಯಗೊಂಡವರ ಪಟ್ಟಿಯನ್ನು ತಾಲ್ಲೂಕುವಾರು ಸಿದ್ದಪಡಿಸಿ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಶಾಶ್ವತ ಅಂಗವಿಕಲತೆಗೆ 10 ಲಕ್ಷ, ಭಾಗಶಃ ಅಂಗವಿಕಲತೆಗೆ 5 ಲಕ್ಷ ಪರಿಹಾರ ನೀಡುವಂತೆ ಅಧಿಕಾರಿಗಳಿಗೆ ತಿಳಿಸಿದ್ದಾರೆ.

ಇದೇ ವೇಳೆ, ಮಲೆನಾಡು ಪ್ರದೇಶದಲ್ಲಿ ನೆಟ್ ವರ್ಕ್ ಸಿಗದಿರುವ ಗ್ರಾಮಗಳು ಮತ್ತು ಸ್ಥಳಗಳನ್ನು ಗುರುತಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

***************

ವಿಜಯಪುರ ಜಿಲ್ಲೆಯ ಕೂಡಗಿ ಗ್ರಾಮ 8 ಸಾವಿರದ 540 ಜನಸಂಖ್ಯೆ ಹೊಂದಿದ್ದು, ಕೇಂದ್ರ ಸರ್ಕಾರದ **'ಸ್ವಚ್ಛ ಭಾರತ್ ಮಿಷನ್'** ಅಭಿಯಾನದಡಿ ಒಂದು ಸಾವಿರದ 83 ಕುಟುಂಬಗಳು ವೈಯಕ್ತಿಕ ಶೌಚಾಲಯಗಳನ್ನು ನಿರ್ಮಿಸಿಕೊಂಡಿವೆ ಎಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮಲ್ಲಿಕಾರ್ಜುನ ಕುಂಟೋಜಿ ತಿಳಿಸಿದ್ದಾರೆ.

706 ಕುಟುಂಬ ಇನ್ನೂ 8 ಸಮುದಾಯ ಶೌಚಾಲಯಗಳನ್ನು ಬಳಸುತ್ತಿವೆ ಎಂದು ಮಾಹಿತಿ ನೀಡಿದ್ದಾರೆ.

***************

**ಯಾದಗಿರಿ** ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಕ್ಕಳ ಕಲ್ಯಾಣ ಸಮಿತಿ ಹಾಗೂ ಜಿಲ್ಲಾಡಳಿತದಿಂದ **"ಅಂತಾರಾಷ್ಟ್ರೀಯ ದತ್ತು ಮಾಸಾಚರಣೆ"** ಹಮ್ಮಿಕೊಳ್ಳಲಾಗಿದೆ.

ದತ್ತು ಮಾಸಾಚರಣೆ ರಾಷ್ಟ್ರೀಯ ಮಾಸಾಚರಣೆಯಾಗಿದ್ದು, 18 ವರ್ಷದವರೆಗಿನ ಸಾಮಾನ್ಯ ಹಾಗೂ ವಿಶೇಷ ಮಕ್ಕಳ ರಕ್ಷಣೆ, ಪೋಷಣೆ ಬಗ್ಗೆ ಇರುವ ಕಾನೂನಾತ್ಮಕ ಕ್ರಮ, ಮಕ್ಕಳ ದತ್ತು ಪಡೆಯುವ ಕುರಿತು ಮಾಹಿತಿ ನೀಡಲಾಗುತ್ತಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ತಿಳಿಸಿದ್ದಾರೆ.

***************

ಗ್ರಾಮೀಣ ಹೆಣ್ಣು ಮಕ್ಕಳು ಹಾಗೂ ಬಡ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗಬಾರದೆಂಬ ಸದುದ್ದೇಶದಿಂದ ಸರ್ಕಾರಿ ಶಾಲೆಗಳನ್ನು ಉನ್ನತೀಕರಿಸಲಾಗುತ್ತಿದೆ. ಪ್ರಸುತ್ತ ವರ್ಷದಲ್ಲಿ ಶೈಕ್ಷಣಿಕ ಕ್ಷೇತ್ರಕ್ಕೆ 12 ಕೋಟಿ ರೂಪಾಯಿ ಅನುದಾನ ನೀಡಲಾಗಿದೆ ಎಂದು ಶಾಸಕ ಹೆಚ್.ಆರ್.ಗವಿಯಪ್ಪ ತಿಳಿಸಿದ್ದಾರೆ.

ಹೊಸಪೇಟೆಯಲ್ಲಿ ಸರ್ಕಾರಿ ಪ್ರೌಢಶಾಲೆ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರದ ಈ ಕ್ರಮ ಶಾಲೆಯ ಸುತ್ತಮುತ್ತಲಿನ ಗ್ರಾಮೀಣ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಪಡೆಯಲು ಸಹಕಾರಿಯಾಗಲಿದೆ ಎಂದು ಹೇಳಿದ್ದಾರೆ.

*******ಮುಕ್ತಾಯ*******